**ವಿಷಯ:** ಕೃಷ್ಣರಾಜಪೇಟೆಯ ಕಿಕ್ಕೇರಿ ರಸ್ತೆಯಲ್ಲಿರುವ ಹೇಮಾವತಿ ವಸತಿ ಕಾಲೋನಿಯಲ್ಲಿ ಹಾಪ್‌ಕಾಮ್ಸ್ ಮಳಿಗೆ ತೆರೆಯಲು 10 x 15 ಅಡಿ ಅಳತೆಯ ಜಾಗವನ್ನು ಲೀಸ್ ಆಧಾರದ ಮೇಲೆ ಮಂಡ್ಯ ಜಿಲ್ಲಾ ಹಾಪ್‌ಕಾಮ್ಸ್ ಸಂಸ್ಥೆ, ಮಂಡ್ಯ ಇವರಿಗೆ ನೀಡುವ ಬಗ್ಗೆ.

*****

ಓದಲಾಗಿದೆ :-

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿ/ಆ/ಸಿ-4/ಸಿಆರ್.39/2018-19/4045-46, ದಿನಾಂಕ:25/11/2020
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿ/ಆ/ಸಿ-4/ಸಿಆರ್.255/2018-19/7021, ದಿನಾಂಕ:30/03/2021

ಪ್ರಸ್ತಾವನೆ :

ಮೇಲೆ ಓದಲಾದ (1) ಪತ್ರದಲ್ಲಿ ಕೃಷ್ಣರಾಜಪೇಟೆಯ ಕಿಕ್ಕೇರಿ ರಸ್ತೆಯಲ್ಲಿರುವ ಹೇಮಾವತಿ ವಸತಿ ಕಾಲೋನಿಯಲ್ಲಿ ಹಾಪ್‌ಕಾಮ್ಸ್ ಮಳಿಗೆ ತೆರೆಯಲು 10 x 15 ಅಡಿ ಅಳತೆಯ ಜಾಗವನ್ನು ಹಸ್ತಾಂತರಿಸಲು ಕಾರ್ಯಪಾಲಕ ಇಂಜಿನಿಯರ್, ನಂ.3, ಹೇಮಾವತಿ ಎಡದಂಡೆ ನಾಲಾ ವಿಭಾಗ, ಕೆ.ಆರ್.ಪೇಟೆ ರವರನ್ನು ವ್ಯವಸ್ಥಾಪಕ ನಿರ್ದೇಶಕರು, ಮಂಡ್ಯ ಜಿಲ್ಲಾ ಹಾಪ್ ಕಾಮ್ಸ್ ಸಂಸ್ಥೆ, ಮಂಡ್ಯ ರವರು ದಿನಾಂಕ:09.06.2020ರ ಪತ್ರದಲ್ಲಿ ಕೋರಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿ ರವರು ವರದಿ ಮಾಡಿರುತ್ತಾರೆ.

ಮುಂದುವರೆದು, ಹೇಮಾವತಿ ವಸತಿ ಕಾಲೋನಿಯಲ್ಲಿ ಒಟ್ಟು 3 ಎಕರೆ 32 ಗುಂಟೆ ವಿಸ್ತೀರ್ಣ ಪ್ರದೇಶವು ನಿಗಮದ ಸ್ವಾಧೀನದಲ್ಲಿರುದಾಗಿ, ಮಂಡ್ಯ ಜಿಲ್ಲಾ ಹಾಪ್‌ಕಾಮ್ಸ್ ಸಂಸ್ಥೆ, ಮಂಡ್ಯ ರವರು ಕೋರಿರುವ ಜಾಗವು ಎರಡು ರಸ್ತೆಯ ಕಾರ್ನರ್ ಪ್ರದೇಶವಾಗಿದ್ದು, ಅಲ್ಲಿ ಯಾವುದೇ ಕಟ್ಟಡಗಳಿರುವುದಿಲ್ಲವೆಂದು, ಸದರಿ ಜಾಗವನ್ನು ಹಾಪ್‌ಕಾಮ್ಸ್ ಗೆ ನೀಡಿದಲ್ಲಿ, ಇದರಿಂದ ಇಲಾಖೆಗೆ ಯಾವುದೇ ಅಡಚಣೆ ಆಗುವುದಿಲ್ಲವೆಂದು ತಿಳಿಸಿರುತ್ತಾರೆ. ದಿನಾಂಕ:05-10-2020 ರಂದು ಜರುಗಿದ 72ನೇ ನಿಗಮ ಮಂಡಳಿ ಸಭೆಯಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ (ಹಣ್ಣು ಮತ್ತು ತರಕಾರಿ ಮಾರಾಟ ಮಳಿಗೆ ತೆರೆಯಲು) ಸರ್ಕಾರಿ ಸ್ವಾಮ್ಯದ ಹಾಪ್‌ಕಾಮ್ಸ್ ಮಳಿಗೆಯನ್ನು ತೆರೆಯಲು 10 x 15 ಅಡಿ ಜಾಗವನ್ನು ಪ್ರತಿ ಮಾಹೆ ರೂ.423/- ಗಳಂತೆ ವಾರ್ಷಿಕ ಶುಲ್ಕ ರೂ.5,076/- ಗಳನ್ನು ಪಾವತಿಸುವ (ಪ್ರತಿ ವರ್ಷಕ್ಕೆ ಶೇಕಡ 10% ನೆಲ ಬಾಡಿಗೆಯನ್ನು ಹೆಚ್ಚಿಸಿಕೊಂಡು) ಹಾಗೂ ನಿಗಮವು ವಿಧಿಸುವ ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಟ್ಟು 30 ವರ್ಷಗಳ ಅವಧಿಗೆ ಲೀಸ್ ಆಧಾರದ ಮೇಲೆ ಮಂಡ್ಯ ಜಿಲ್ಲಾ ಹಾಪ್‌ಕಾಮ್ಸ್ ಸಂಸ್ಥೆ, ಮಂಡ್ಯ ರವರಿಗೆ ನೀಡಲು ಅನುಮೋದಿಸಿ ನಿರ್ಣಯಿಸಲಾಗಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ವರದಿ ಮಾಡುತ್ತಾ, ಸದರಿ ಜಮೀನನ್ನು ನೀಡಲು ಸರ್ಕಾರದ ಅನುಮೋದನೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ:-

ಸರ್ಕಾರಿ ಆದೇಶ ಸಂಖ್ಯೆ:ಜಸಂಇ **124** ಎನ್‌ಹೆಚ್‌ಪಿ **2020,**
ಬೆಂಗಳೂರು, ದಿನಾಂಕ: **08/10/2021**

ಕೃಷ್ಣರಾಜಪೇಟೆಯ ಕಿಕ್ಕೇರಿ ರಸ್ತೆಯಲ್ಲಿರುವ ಹೇಮಾವತಿ ವಸತಿ ಕಾಲೋನಿಯಲ್ಲಿ ಹಾಪ್‌ಕಾಮ್ಸ್ ಮಳಿಗೆ ತೆರೆಯಲು 10 x 15 ಅಡಿ ಅಳತೆಯ ಜಾಗವನ್ನು ಪ್ರತಿ ಮಾಹೆ ರೂ.423/- ಗಳಂತೆ ವಾರ್ಷಿಕ ಶುಲ್ಕ ರೂ.5,076/- ಗಳನ್ನು

ಪುಟ 2 ಕ್ಕೆ

ಪಾವತಿಸುವ (ಪ್ರತಿ ವರ್ಷಕ್ಕೆ ಶೇಕಡ 10% ನೆಲ ಬಾಡಿಗೆಯನ್ನು ಹೆಚ್ಚಿಸಿಕೊಂಡು) 30 ವರ್ಷಗಳ ಅವಧಿಗೆ ಲೀಸ್ ಆಧಾರದ ಮೇಲೆ ಮಂಡ್ಯ ಜಿಲ್ಲಾ ಹಾಪ್‌ಕಾಮ್ಸ್ ಸಂಸ್ಥೆ, ಮಂಡ್ಯ ರವರಿಗೆ ನೀಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಹಾಗೂ ಕಾವೇರಿ ನೀರಾವರಿ ನಿಗಮವು ವಿಧಿಸುವ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿದೆ.

1. ನಿಗದಿಪಡಿಸಿದ ಬಾಡಿಗೆಯನ್ನು ನಿಯಮಿತವಾಗಿ ಪಾವತಿಸಬೇಕು.
2. ಸದರಿ ಜಾಗದಲ್ಲಿ ಯಾವುದೇ ನಿರ್ಮಾಣ ಕಾಮಗಾರಿ ಕೈಗೊಳ್ಳಬೇಕಾದಲ್ಲಿ ಕಾವೇರಿ ನೀರಾವರಿ ನಿಗಮದ ಸಕ್ಷಮ ಪ್ರಾಧಿಕಾರಿಯವರ ಅನುಮತಿ ಪಡೆಯಬೇಕು.
3. ಸದರಿ ಜಾಗದಲ್ಲಿ ಯಾವುದೇ ಖಾಯಂ ಕಟ್ಟಡ ನಿರ್ಮಾಣ ಮಾಡಬಾರದು.
4. ಸದರಿ ಜಾಗವನ್ನು ಬೇರೆ ಉದ್ದೇಶಗಳಿಗೆ ಉಪಯೋಗಿಸಬಾರದು.
5. ಸದರಿ ಜಮೀನನ್ನು ಬೇರೆಯವರಿಗೆ ವರ್ಗಾಯಿಸಬಾರದು.
6. ಇಲಾಖೆಯ/ ನಿಗಮದ ಅಧಿಕಾರಿಗಳು ಯಾವುದೇ ಸಮಯದಲ್ಲಿ ಸದರಿ ಸ್ಥಳದ ಪರಿಶೀಲನೆ ಮಾಡುವ ಅಧಿಕಾರ ಹೊಂದಿರುತ್ತಾರೆ.
7. ಸದರಿ ಜಮೀನು ಜಲಸಂಪನ್ಮೂಲ ಇಲಾಖೆಯ ಉಪಯೋಗಕ್ಕಾಗಿ ಅವಶ್ಯವಿದ್ದಲ್ಲಿ ಹಿಂದಕ್ಕೆ ಪಡೆಯುವ ಅಧಿಕಾರ ಇಲಾಖೆಗೆ ಇರುತ್ತದೆ.
8. ಅವಧಿ ಮುಗಿದ ನಂತರ ಸದರಿ ಜಮೀನನ್ನು ಸುಸ್ಥಿತಿಯಲ್ಲಿ ಹಿಂದಿರುಗಿಸಬೇಕು.

2. ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 32 ಎಲ್‌ಜಿಪಿ 2019, ದಿನಾಂಕ:01.02.2021ರನ್ವಯ ಮಾನ್ಯ ಜಲಸಂಪನ್ಮೂಲ ಸಚಿವರ ಹಾಗೂ ಮಾನ್ಯ ತೋಟಗಾರಿಕೆ ಸಚಿವರ ಅನುಮೋದನೆಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
08/10/2021
( ಮನೋಹರ ವೈ. ರೊಟ್ಟೆ )
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂ-2)
ಜಲಸಂಪನ್ಮೂಲ ಇಲಾಖೆ

ಇವರಿಗೆ :

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕ ಪರಿಶೋಧನ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಗ್ರೇಡ್-2), ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಗ್ರೇಡ್-1), ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಗ್ರೇಡ್-2), ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ.
5. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಗ್ರೇಡ್-2), ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ
6. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

+++++